ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಪಾಂಡವಪುರ.

## ಸಿ.ಸಿ. 775/2021

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| ಹೆಸರು | ಃ | ತವೆ್ಮೀಗೌಡ | ಚಾಸಾಃ **8** ಪ್ರಾಸಾಃ **6** |
| ತಂದೆಯ ಹೆಸರು | ಃ | ಕೆಂಪೇಗೌಡ | |
| ವಯಸ್ಸು | ಃ | **45** ವರ್ಷ | |
| ವೃತ್ತಿ | ಃ | ವ್ಯಾಪಾರ | |
| ವಾಸಸ್ಥಳ | ಃ | ಎಂ.ಶೆಟ್ಟಹಳ್ಳಿ ಗ್ರಾಮ | |

ದಿನಾಂಕಃ **24.06.2025** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ

ಈ ಪ್ರಕರಣಳದ ಬಗ್ಗೆ ನನಗೇನು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಬೈಕ್ ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗ ನಿಪಿ-**9** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**9(**ಎ**)** ಎಂದು ಗುರುತಿಸಲಾಯಿತು. ನಾನು ನಿಪಿ-9 ದಾಖಲೆಗೆ ಸುಮಾರು 2 ವರ್ಷಗಳ ಹಿಂದೆ ನಮ್ಮ ಊರಿನ ಅಂಗಡಿಯ ಬಳಿ ಪೊಲೀಸರು ಸಹಿ ಪಡೆದರು. ಅದರಲ್ಲಿ ಏನು ಬರೆದಿದೆ ಎಂಬುದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಬೈಕ್ ಅನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ.ರು ಅನುಮತಿ ಕೋರಿರುತ್ತಾರೆ. ಅನುಮತಿಸಲಾಯಿತು.)

<u>ಪಾಟೀ ಸವಾಲುಃ ಸ.ಸ.ಅ.ರಿಂದಃ</u>

**01**. ದಿನಾಂಕಃ 22.04.2021 ರಂದು ಪಾಂಡವಪುರ ಪೊಲೀಸರು ಠಾಣೆಯ ಅವರಣದಲ್ಲಿ ಕೆ.ಎ.11-ಇ.ಆರ್.6556 ವಾಹನವನ್ನು ರಸ್ತೆ ಅಪಘಾತಕ್ಕೆ ಸಂಬಂದಿಸಿದಂತೆ ವಶಪಡಿಸಿಕೊಂಡು, ಬೆಳಗ್ಗೆ 10.00 ರಿಂದ 10.30 ರ ಗಂಟೆಗೆ ಮಹಜರ್ ಕ್ರಮ ಜರುರಿಸಿದರು ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾ,ಸಾ-9 ರವರು ಹಾಜರಿದ್ದು ಸಹಿ ಹಾಕಿದ್ದೇವೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಃ ಆರೋಪಿ ಪರ ವಕೀಲರು ಏನು ಇಲ್ಲ ಎಂದು ತಿಳಿಸಿರುತ್ತಾರೆ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

**I/C 2** ನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,
ಪಾಂಡವಪುರ.

ಸಾಕ್ಷಿದಾರರ ಸಹಿ.